# ಉಪಸಭಾಧ್ಯಕ್ಷ ಕೃಷ್ಣಾರೆಡ್ಡಿಗೆ ನೋಟಿಸ್

ಬೆಂಗಳೂರು: ವಿಧಾನಸಭೆಯ ಉಪಸಭಾಧ್ಯಕ್ಷ ಸ್ಥಾನಕ್ಕೆ ಕೃಷ್ಣಾರೆಡ್ಡಿ ಅವರು ರಾಜೀನಾಮೆ ನೀಡದ ಕಾರಣ ಆಡಳಿತ ಸರಕಾರ ನೋಟಿಸ್ ನೀಡಿದೆ. ರಾಜ್ಯದಲ್ಲಿ ಕಾಂಗ್ರೆಸ್-ಜೆಡಿಎಸ್ ನೇತೃತ್ವದ ಮೈತ್ರಿ ಸರಕಾರ ಬದಲಾಗಿದ್ದರೂ ವಿಧಾನಸಭೆಯ ಉಪಾಸಭಾಧ್ಯಕ್ಷ ಸ್ಥಾನ ಮಾತ್ರ ಬದಲಾಗಿಲ್ಲ. ಸ್ವತಃ ಸ್ಥಾನಕ್ಕೆ ರಾಜೀನಾಮೆ ನೀಡುತ್ತಾರೆಂದು ಸರಕಾರ ಪರಿಗಣಿಸಿತ್ತು. ಬಿಜೆಪಿ ಶಾಸಕರೊಬ್ಬರಿಗೆ ಈ ಸ್ಥಾನ ನೀಡಲು ಮುಂದಾಗಿದ್ದು, ಉಪಸಭಾಧ್ಯಕ್ಷ ಸ್ಥಾನಕ್ಕೆ ಕೃಷ್ಣಾರೆಡ್ಡಿ ಅವರು ರಾಜೀನಾಮೆ ನೀಡದಿದ್ದರೆ ಅವಿಶ್ವಾಸ ನಿರ್ಣಯ ಮಂಡಿಸಲು ಬಿಜೆಪಿ ಸಿದ್ಧವಾಗಿದೆ. ನಿಯಮಗಳ ಪ್ರಕಾರ ವಿಧಾನಸಭಾಧ್ಯಕ್ಷ ಹಾಗೂ ಉಪಸಭಾಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು 14 ದಿನಗಳ ಮುಂಚಿತವಾಗಿ ನೋಟಿಸ್ ನೀಡಬೇಕು. ವಿಧಾನಸಭೆಯ ಸ್ಪೀಕರ್ ಹಾಗೂ ಡೆಪ್ಯುಟಿ ಸ್ಪೀಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಾಧ್ಯತೆಗಳು ತೀರಾ ಕಡಿಮೆ. ಆದರೆ ಪಕ್ಷ ಅಧಿಕಾರದಿಂದ ಕೆಳಗಿಳಿದಿದ್ದರೂ ರಾಜೀನಾಮೆ ನೀಡದಿದ್ದರೆ ಅವಿಶ್ವಾಸ ನಿರ್ಣಯ ಮಂಡನೆ ಮಾಡುವುದು ಅನಿವಾರ್ಯವಾಗುತ್ತದೆ. ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರಕಾರದ ಅವಧಿಯಲ್ಲಿ ಕಾಂಗ್ರೆಸ್‌ನ ಶಾಸಕ ರಮೇಶ್ ಕುಮಾರ್ ಸ್ಪೀಕರ್ ಆಗಿದ್ದರೆ, ಚಿಂತಾಮಣಿ ಕ್ಷೇತ್ರದ ಜೆಡಿಎಸ್ ಶಾಸಕ ಕೃಷ್ಣಾರೆಡ್ಡಿ ಅವರು ಡೆಪ್ಯೂಟಿ ಸ್ಪೀಕರ್ ಆಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದರು. ಮೈತ್ರಿ ಸರಕಾರ ಹೋಗಿ ಬಿಜೆಪಿ ಅಧಿಕಾರಕ್ಕೆ ಬಂದರೂ ಕೃಷ್ಣಾರೆಡ್ಡಿ ಅವರು ಮಾತ್ರ ರಾಜೀನಾಮೆ ನೀಡಿರಲಿಲ್ಲ. ಇದೀಗ ಅವರೇ ಸ್ವಯಂ ಪ್ರೇರಿತವಾಗಿ ರಾಜೀನಾಮೆ ನೀಡಲು ನೋಟೀಸ್ ನೀಡಲಾಗಿದೆ.

ವಿಶ್ವವಾಣಿ 3/3/2020

15